ದೂರವಾಣಿ ಸಂ. : 080 2956 2046

# ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರ

ಎಸ್.ಎನ್. ಕಾಂಪ್ಲೆಕ್ಸ್, ಮೊದಲನೇ ಮಹಡಿ, ನಗರ ಪೊಲೀಸ್ ಠಾಣೆ ಎದುರು, 'ಡಿ' ಕ್ರಾಸ್, ದೊಡ್ಡಬಳ್ಳಾಪುರ-561203.

ಸಂಖ್ಯೆ: DPA/TP/CC/282/2025-26 ದಿನಾಂಕ: 26 FEB 2026

## "ಪ್ರಾರಂಭಿಕ ಪ್ರಮಾಣ ಪತ್ರ"

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 15(1) ರನ್ವಯ)
(ಕರ್ನಾಟಕ ನಗರ ಯೋಜನಾ ಪ್ರಾಧಿಕಾರಗಳ ನಿಯಮಗಳ 1965 ರ ನಿಯಮ 30 ನಮೂನೆ 3 ರನ್ವಯ)

ವಿಷಯ: ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ಹೊಸಹುಡ್ಯ ಗ್ರಾಮದ ಸರ್ವೆ ನಂ. 37/1ಎ ಮತ್ತು 37/1ಬಿ ಗಳಲ್ಲಿನ ಒಟ್ಟು 4ಎಕರೆ 10ಗುಂಟೆ ಅಥವಾ 17198.90 ಚ.ಮೀ. ವಿಸ್ತೀರ್ಣದ ಪ್ರದೇಶದಲ್ಲಿ ಒಟ್ಟಾರೆಯಾಗಿ ಅನುಮೋದಿಸಲಾಗಿರುವ ವಸತಿ ಉದ್ದೇಶದ ಅಭಿವೃದ್ಧಿ ಯೋಜನಾ ನಕ್ಷೆಯ ಖಾತಾ ಸಂಖ್ಯೆ 201/99 (ಸ್ವತ್ತಿನ ಸಂಖ್ಯೆ: 150300301700620273) ರ ಪ್ರದೇಶದಲ್ಲಿ 'ವಸತಿ ಮತ್ತು ವಾಣಿಜ್ಯ' ಉದ್ದೇಶದ ಕಟ್ಟಡ ಕಟ್ಟಲು ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲು ಕೋರಿ ಸಲ್ಲಿಸಿರುವ ಅರ್ಜಿಯ ಬಗ್ಗೆ.

ಉಲ್ಲೇಖ:
1. ಈ ಪ್ರಾಧಿಕಾರದಿಂದ ಅನುಮೋದಿಸಿರುವ ವಸತಿ ಉದ್ದೇಶದ ಅಭಿವೃದ್ಧಿ ಯೋಜನಾ ನಕ್ಷೆ ಆದೇಶ ಪತ್ರ ಸಂಖ್ಯೆ: DPA/TP/DP/02/2025-26 ದಿನಾಂಕ: 11/11/2025.
2. ಮೆ॥ ಹೆಬ್ಬಾಳ್ ಪ್ರಾಪರ್ಟಿಸ್ ಪ್ರೈವೇಟ್ ಲಿಮಿಟೆಡ್ ರವರು ಸಲ್ಲಿಸಿರುವ ಮನವಿ ಅರ್ಜಿಯ ಸ್ವೀಕೃತಿ ಸಂಖ್ಯೆ: 2438 ದಿ: 11/12/2025.
3. ಮಹಾನಗರ ಯೋಜಕರು ಬಿಎಂಆರ್‌ಡಿಎ ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರರವರು ಪೂರ್ವಾನುಮತಿ ನೀಡಿರುವ ದಿನಾಂಕ: 12/01/2026.
4. ಈ ಪ್ರಾಧಿಕಾರದ ಸಮ ಸಂಖ್ಯೆಯ ಶುಲ್ಕ ಪಾವತಿ ಸೂಚನಾ ಪತ್ರ ದಿ: 16/01/2026.
5. ಪ್ರಾಧಿಕಾರದ ರಶೀದಿ ಸಂಖ್ಯೆ: 3153 ದಿ: 30/01/2026.

********

ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ಹೊಸಹುಡ್ಯ ಗ್ರಾಮದ ಸರ್ವೆ ನಂ. 37/1ಎ ಮತ್ತು 37/1ಬಿ ಗಳಲ್ಲಿನ ಒಟ್ಟು 4ಎಕರೆ 10ಗುಂಟೆ ಅಥವಾ 17198.90 ಚ.ಮೀ. ವಿಸ್ತೀರ್ಣದ ಪ್ರದೇಶಕ್ಕೆ ದಿನಾಂಕ:30.08.2025 ರಂದು ನಡೆದ ಪ್ರಾಧಿಕಾರದ 37ನೇ ಸಭೆಯ ವಿಷಯ ಸಂಖ್ಯೆ: 37.35 ರ ತೀರ್ಮಾನದಂತೆ ಉಲ್ಲೇಖ (1) ರಲ್ಲಿ ಅನುಮೋದಿತ ವಸತಿ ಉದ್ದೇಶದ ಅಭಿವೃದ್ಧಿ ಯೋಜನಾ ನಕ್ಷೆಯ ಪ್ರದೇಶದಲ್ಲಿ 'ವಸತಿ ಮತ್ತು ವಾಣಿಜ್ಯ' ಉದ್ದೇಶದ ಕಟ್ಟಡ ಕಟ್ಟುವ ಸಂಬಂಧ ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿ ಉಲ್ಲೇಖ (2) ರಂತೆ ಮೆ॥ ಹೆಬ್ಬಾಳ್ ಪ್ರಾಪರ್ಟಿಸ್ ಪ್ರೈವೇಟ್ ಲಿಮಿಟೆಡ್‌ರವರು ಅರ್ಜಿ ಸಲ್ಲಿಸಿರುತ್ತಾರೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 234 ಬಿಎಂಆರ್ 2023 (ಇ) ದಿನಾಂಕ: 20-11-2023 ರಂತೆ ಅನುಮೋದನೆಯಾದ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ನಿಯಮಗಳು 2020 ರಲ್ಲಿನ ನಿಯಮ 18(5) ರನ್ವಯ ಮತ್ತು ದಿನಾಂಕ: 27-12-2023 & 03-02-2024 ರಂದು ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ಅಧಿಕೃತ ಜ್ಞಾಪನ ಪತ್ರದಲ್ಲಿ ಸೂಚಿಸಿರುವಂತೆ 1ಎಕರೆ ಮೇಲ್ಪಟ್ಟ ವಿಸ್ತೀರ್ಣದ ಪ್ರಸ್ತಾವನೆಗಳನ್ನು ಪೂರ್ವ ಸಮ್ಮತಿಗಾಗಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸಬೇಕಾಗಿದ್ದು, ಅದರಂತೆ ಪ್ರಸ್ತಾಪಿತ 'ವಸತಿ ಮತ್ತು ವಾಣಿಜ್ಯ' ಉದ್ದೇಶದ ಕಟ್ಟಡ ನಿರ್ಮಿಸಲು ನಕ್ಷೆಗೆ ಅನುಮೋದನೆ ಹಾಗೂ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಉಲ್ಲೇಖ (3) ರನ್ವಯ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದಿಂದ ಪೂರ್ವ ಸಮ್ಮತಿಯನ್ನು ಪಡೆಯಲಾಗಿರುತ್ತದೆ.

.....2



E-mail :dpa.dbpura2018@gmail.com Website : www.doddaballapur.tpa.gov.in

ಉಲ್ಲೇಖ (4) ರ ಈ ಪ್ರಾಧಿಕಾರದ ಶುಲ್ಕ ಪಾವತಿ ಸೂಚನಾ ಪತ್ರದಲ್ಲಿ ಅಗತ್ಯ ಶುಲ್ಕಗಳನ್ನು 90 ದಿನಗಳೊಳಗಾಗಿ ಪಾವತಿಸಲು ಹಾಗೂ ಪ್ರಸ್ತಾವಿತ ಪ್ರದೇಶಕ್ಕೆ ವಲಯ ನಿಯಮಾವಳಿಗೆ ಅನುಗುಣವಾಗಿ ತಯಾರಿಸಿರುವ ಕಟ್ಟಡ ನಕ್ಷೆಯ ನೀಲಿ ಪ್ರತಿಗಳನ್ನು ಅರ್ಜಿದಾರರು/ಅಭಿಯಂತರರ ಸಹಿಗಳೊಂದಿಗೆ ಸಲ್ಲಿಸಲು ಸೂಚಿಸಲಾಗಿರುತ್ತದೆ.

ಉಲ್ಲೇಖ (5) ರಂತೆ ಕಟ್ಟಡ ನಕ್ಷೆ ಅನುಮೋದನೆ ಸಂಬಂಧ ಶುಲ್ಕಗಳನ್ನು ಪಾವತಿಸಿರುತ್ತಾರೆ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿರವರಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸುವುದಾಗಿ ಪ್ರಮಾಣ ಪತ್ರವನ್ನು ಹಾಗೂ ಕಟ್ಟಡ ನಕ್ಷೆಯ ನೀಲಿ ಪ್ರತಿಗಳನ್ನು ಅನುಮೋದನೆಗಾಗಿ ಸಲ್ಲಿಸಿದ್ದು, ಈ ಕೆಳಗಿನ ನಿಬಂಧನೆಗಳೊಂದಿಗೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲಾಗಿದೆ.

## ನಿಬಂಧನೆಗಳು

1. ಈ ಪ್ರಾಧಿಕಾರದ ಅಭಿವೃದ್ಧಿ ಯೋಜನಾ ನಕ್ಷೆಯ ಅನುಮೋದನೆ ಆದೇಶ ಪತ್ರ ಸಂಖ್ಯೆ: DPA/TP/DP/02/2025-26 ದಿನಾಂಕ: 11/11/2025 ರ ಆದೇಶದಲ್ಲಿ ವಿಧಿಸಲಾಗಿರುವ ಎಲ್ಲಾ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು.
2. ಅನುಮೋದಿತ ಕಟ್ಟಡ ನಕ್ಷೆಯಂತೆ ನಡುಜಾಗವನ್ನು ಬಿಟ್ಟು ಕಟ್ಟಡ ಕಟ್ಟತಕ್ಕದ್ದು ಹಾಗೂ ಯೋಜಿಸಿರುವ ಕಟ್ಟಡವನ್ನು ಕಟ್ಟಡ ನಕ್ಷೆಯಲ್ಲಿ ನಮೂದಿಸಿರುವ ಉದ್ದೇಶಕ್ಕಾಗಿಯೇ ಉಪಯೋಗಿಸತಕ್ಕದ್ದು.
3. ಪ್ರಸ್ತಾಪಿತ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ರವರಿಂದ ಪಡೆಯತಕ್ಕದ್ದು ಹಾಗೂ ಸದರಿ ನಿರಾಕ್ಷೇಪಣಾ ಪತ್ರದಲ್ಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
4. ಪ್ರಸ್ತಾಪಿತ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ Executive Engineer (Ele), C, O & M, Sub Division, BESCOM, Doddaballapura Urban ರವರ ಪತ್ರ ಸಂಖ್ಯೆ: EEE/NEL/AEE(O)/AET/25-26/5473-74 ದಿನಾಂಕ: 19/07/2025 ರ ಪತ್ರದಲ್ಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ಪ್ರಸ್ತಾಪಿತ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾ ರವರ ನಿರಾಕ್ಷೇಪಣಾ ಪತ್ರ ಸಂಖ್ಯೆ: BIAL/SOUTH/B/100824/1271707 ದಿನಾಂಕ: 26/11/2024 ರ ಪತ್ರದಲ್ಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
6. ಪ್ರಸ್ತಾಪಿತ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ಅಗ್ನಿ ಮತ್ತು ತುರ್ತು ಸೇವೆಗಳು ರವರಿಂದ ಪಡೆದಿರುವ ನಿರಾಕ್ಷೇಪಣಾ ಪತ್ರ ಸಂಖ್ಯೆ: KSFES/GBC(1)330 ದಿನಾಂಕ: 23/10/2025 ಪತ್ರದಲ್ಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
7. ಪ್ರಸ್ತಾಪಿತ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಮಿನಿಸ್ಟ್ರಿ ಆಫ್ ಎನ್‌ವಿರಾನ್‌ಮೆಂಟ್ ಫಾರೆಸ್ಟ್ ಅಂಡ್ ಕ್ಲೈಮೆಟ್ ಛೇಂಜ್ ಅಥಾರಿಟಿ ರವರಿಂದ ಪಡೆದಿರುವ ನಿರಾಕ್ಷೇಪಣಾ ಪತ್ರ ಸಂಖ್ಯೆ: EC Identification No. EC25C3801KA 5901531N ದಿನಾಂಕ: 04/09/2024 ಪತ್ರದಲ್ಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
8. ಪ್ರಸ್ತಾಪಿತ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಸ್ಟೇಟ್ ಲೆವೆಲ್ ಎನ್‌ವಿರಾನ್‌ಮೆಂಟ್ ಇಂಫ್ಯಾಕ್ಟ್ ಅಸೆಸ್‌ಮೆಂಟ್ ಅಥಾರಿಟಿ ರವರಿಂದ ಪಡೆದಿರುವ ನಿರಾಕ್ಷೇಪಣಾ ಪತ್ರ ಸಂಖ್ಯೆ: SEIAA 210 CON 2025 Dated: 26/09/2025 ಪತ್ರದಲ್ಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
9. ಈ ಪ್ರಾರಂಭಿಕ ಪ್ರಮಾಣ ಪತ್ರವನ್ನು ಅನುಮೋದನೆ ದಿನಾಂಕದಿಂದ ಎರಡು ವರ್ಷದ ಅವಧಿಗೆ ಮಾತ್ರ ನೀಡಲಾಗಿರುತ್ತದೆ.

.....3

10. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮದ ಪ್ರಕಾರ ಇದು ಪ್ರಾರಂಭಿಕ ಪ್ರಮಾಣ ಪತ್ರವಾಗಿದ್ದು, ಈ ಪತ್ರದ ಅಧಾರದ ಮೇಲೆ ಅವಶ್ಯಕ ಇತರೆ ಪರವಾನಿಗೆಯನ್ನು **ಮಜರಾಹೊಸಹಳ್ಳಿ ಗ್ರಾಮ** ಪಂಚಾಯ್ತಿ ರವರಿಂದ ಪಡೆದ ನಂತರ ಅಭಿವೃದ್ಧಿ ಕಾರ್ಯ ಕೈಗೊಳ್ಳತಕ್ಕದ್ದು.
11. ಕಾಲುವೆ/ಕೆರೆ/ಇತ್ಯಾದಿ.... ಬಫರ್‌ಗೆ ಒಳಪಡುವ ಪ್ರದೇಶಕ್ಕೆ ನಿಯಮಾನುಸಾರ ಬಫರ್ ಬಿಡುವ ಷರತ್ತಿಗೊಳಪಟ್ಟಿರುತ್ತದೆ.
12. ಪ್ರಸ್ತಾಪಿತ ವಸತಿ ಉದ್ದೇಶದ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಕಾಯ್ದಿರಿಸಲಾದ ಸರ್ಕಾರಿ ಖರಾಬು ಜಾಗಗಳನ್ನು ಯಥಾರೀತಿಯಾಗಿ ನೆಲದ ಮೇಲೆ ಕಾಯ್ದಿರಿಸಿ ಒತ್ತುವರಿಯಾಗದಂತೆ ಕಾಪಾಡತಕ್ಕದ್ದು.
13. ಅರ್ಜಿದಾರರು ಸರ್ಕಾರದ ಖರಾಬು ಬಗ್ಗೆ ತಪ್ಪು ಮಾಹಿತಿ ನೀಡಿ, ಅನುಮೋದನೆ ಪಡೆದಿದ್ದಲ್ಲಿ ಪ್ರಾಧಿಕಾರದಿಂದ ನೀಡಿರುವ ಅನುಮೋದನೆಯು ತಂತಾನೆ ರದ್ದಾಗುತ್ತದೆ.
14. ಕಟ್ಟಡವನ್ನು ಹಾಲಿ ಇರುವ ವಲಯ ನಿಯಮಾವಳಿ ಹಾಗೂ ಕಟ್ಟಡದ ವಿಧಿಯ ಪ್ರಕಾರ ಕಟ್ಟಬೇಕು. ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಈ ಪ್ರಾರಂಭಿಕ ಪ್ರಮಾಣ ಪತ್ರದ ಮೂಲಕ ಅನುಮೋದಿಸಿರುವ ನಕ್ಷೆಯಂತೆಯೇ ಕೈಗೊಳ್ಳಬೇಕು. ಈ ಕಛೇರಿಯ ಪೂರ್ವಾನುಮತಿ ಪಡೆಯದೇ ಯಾವುದೇ ಬದಲಾವಣೆಯನ್ನು ಮಾಡತಕ್ಕದ್ದಲ್ಲ.
15. ಕಟ್ಟಡದ ಮತ್ತು ಯಾವುದೇ ಅಭಿವೃದ್ಧಿಯ ತಳಪಾಯ, ಅಗ್ನಿಶಾಮಕ ವ್ಯವಸ್ಥೆ ಹಾಗೂ ಇತರ ಭದ್ರತಾ ವ್ಯವಸ್ಥೆಗಳು ಅರ್ಜಿದಾರರ ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ. ಈ ಸಂಬಂಧ ಯಾವುದೇ ಅನಾಹುತಗಳಿಗೆ ಈ ಪ್ರಮಾಣ ಪತ್ರ ಬದ್ಧವಲ್ಲ ಹಾಗೂ ಪ್ರಾಧಿಕಾರವು ಜವಾಬ್ದಾರರಾಗುವುದಿಲ್ಲ.
16. ಕಟ್ಟಡವನ್ನು ಹಾಲಿ ಇರುವ ವಲಯ ನಿಯಮಾವಳಿ ಹಾಗೂ ಕಟ್ಟಡದ ವಿಧಿಯ ಪ್ರಕಾರ ಕಟ್ಟಬೇಕು. ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಈ ಪ್ರಾರಂಭಿಕ ಪ್ರಮಾಣ ಪತ್ರದ ಮೂಲಕ ಅನುಮೋದಿಸಿರುವ ನಕ್ಷೆಯಂತೆಯೇ ಕೈಗೊಳ್ಳಬೇಕು. ಈ ಕಛೇರಿಯ ಪೂರ್ವಾನುಮತಿ ಪಡೆಯದೇ ಯಾವುದೇ ಬದಲಾವಣೆಯನ್ನು ಮಾಡತಕ್ಕದ್ದಲ್ಲ.
17. ಕಟ್ಟಡದ ಮತ್ತು ಯಾವುದೇ ಅಭಿವೃದ್ಧಿಯ ತಳಪಾಯ, ಅಗ್ನಿಶಾಮಕ ವ್ಯವಸ್ಥೆ ಹಾಗೂ ಇತರ ಭದ್ರತಾ ವ್ಯವಸ್ಥೆಗಳು ಅರ್ಜಿದಾರರ ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ. ಈ ಸಂಬಂಧ ಯಾವುದೇ ಅನಾಹುತಗಳಿಗೆ ಈ ಪ್ರಮಾಣ ಪತ್ರ ಬದ್ಧವಲ್ಲ ಹಾಗೂ ಪ್ರಾಧಿಕಾರವು ಜವಾಬ್ದಾರರಾಗುವುದಿಲ್ಲ.
18. ಕಟ್ಟಡ ಭದ್ರತೆಯ ಕುರಿತು ನುರಿತ (Structural Engineer) ತಜ್ಞರಿಂದ Structural Details ಪಡೆದು ಅದರಂತೆ ನಿರ್ವಹಿಸುವುದು ಹಾಗೂ ಅವಶ್ಯಕ ಮುಂಜಾಗ್ರತೆಗಳನ್ನು ಕೈಗೊಳ್ಳತಕ್ಕದ್ದು. ಈ ಕುರಿತು ಪ್ರಾಧಿಕಾರಕ್ಕೆ ಯಾವುದೇ ಜವಾಬ್ದಾರಿ ಇರುವುದಿಲ್ಲ.
19. ಕಾಮಗಾರಿಗಳಿಂದಾಗಿ ಪರಿಸರವು ಮಾಲಿನ್ಯವಾಗದಂತೆ ಎಚ್ಚರಿಕೆ ವಹಿಸತಕ್ಕದ್ದು ಮತ್ತು ಸ್ವಾಭಾವಿಕ ಮಳೆಯ ನೀರು ಇಂಗಿ ಹೋಗಲು ವ್ಯವಸ್ಥೆ (Rainwater harvesting) ಯನ್ನು ಮಾಡತಕ್ಕದ್ದು ಮತ್ತು ಸೌರಶಕ್ತಿ ವ್ಯವಸ್ಥೆಯನ್ನು ಕಟ್ಟಡದಲ್ಲಿ ಒದಗಿಸತಕ್ಕದ್ದು ಹಾಗೂ ಸಾಧ್ಯವಾದಷ್ಟು ಮಟ್ಟಿಗೆ ನಿವೇಶನದ ಮುಂಭಾಗದಲ್ಲಿ ಹಾಗೂ ಉದ್ಯಾನವನದಲ್ಲಿ ಗಿಡ/ಮರಗಳನ್ನು ಬೆಳೆಸತಕ್ಕದ್ದು.
20. ಈ ಪ್ರಮಾಣ ಪತ್ರ ನೀಡಿರುವ ಮಾತ್ರಕ್ಕೆ ಯಾವುದೇ ಸೌಲಭ್ಯವನ್ನು ಅರ್ಜಿದಾರರಿಗೆ ನೀಡುವ ಹೊಣೆಗಾರಿಕೆ ಪ್ರಾಧಿಕಾರಕ್ಕಿರುವುದಿಲ್ಲ.
21. ಈ ಪ್ರಾರಂಭಿಕ ಪ್ರಮಾಣ ಪತ್ರದೊಡನೆ ಅನುಮೋದಿಸಲ್ಪಟ್ಟಿರುವ ನಕ್ಷೆಯು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು ಹಾಗೂ ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳಬಾರದು.

.....4

22. ಈ ಪ್ರಾಧಿಕಾರದ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು ಹಾಗೂ ಸಂಪರ್ಕ ರಸ್ತೆಯ ಬಗ್ಗೆ ಯಾವುದೇ ತಕರಾರು ಬಂದರೂ ಈ ಪ್ರಾಧಿಕಾರವು ಹೊಣೆಯಲ್ಲ ಮತ್ತು ನೀವೇ ಸ್ವಂತ ಜವಾಬ್ದಾರಿಯಿಂದ ಬಗೆಹರಿಸಿಕೊಳ್ಳತಕ್ಕದ್ದು.
23. ಈ ಅನುಮತಿಯನ್ನು ಉಲ್ಲಂಘಿಸಿ ಅಭಿವೃದ್ಧಿಯನ್ನು ಕೈಗೊಂಡರೆ ಅಥವಾ ನೀಡಿರುವ ಮಾಹಿತಿಗಳು ದೋಷ ಪೂರ್ಣವಾಗಿದ್ದರೆ ಅನುಮತಿಯನ್ನು ಹಿಂತೆಗೆದುಕೊಳ್ಳಲಾಗುವುದಲ್ಲದೇ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಅನ್ವಯ ಕ್ರಮ ತೆಗೆದುಕೊಳ್ಳಲಾಗುವುದು.
24. ಇತರೆ ಇಲಾಖೆಗಳಿಂದ ಅಗತ್ಯವಿರುವ ಅನುಮತಿ/ನಿರಾಕ್ಷೇಪಣಾ ಪತ್ರಗಳನ್ನು ಸಹ ಪಡೆಯತಕ್ಕದ್ದು.
25. ಅರ್ಜಿದಾರರು ಸಲ್ಲಿಸಿರುವ ಮಾಹಿತಿ/ದಾಖಲಾತಿಗಳು ಸುಳ್ಳು ಅಥವಾ ಪೋರ್ಜರಿಗಳಾಗಿದ್ದರೆ ಈ ಕಛೇರಿಯಿಂದ ನೀಡಿರುವ ಪ್ರಾರಂಭಿಕ ಪ್ರಮಾಣ ಪತ್ರವು ತಂತಾನೆ ರದ್ದಾಗುತ್ತದೆ.

26.02.26

ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು
**ಹಾಗೂ ಸದಸ್ಯ ಕಾರ್ಯದರ್ಶಿಗಳು,**
ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರ,
ದೊಡ್ಡಬಳ್ಳಾಪುರ.

*ಇವರಿಗೆ:*
**ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು**
ಮಜರಾಹೊಸಹಳ್ಳಿ ಗ್ರಾಮ ಪಂಚಾಯಿತಿ,
ದೊಡ್ಡಬಳ್ಳಾಪುರ ತಾಲ್ಲೂಕು,
ಬೆಂಗಳೂರು ಗ್ರಾಮಾಂತರ ಜಿಲ್ಲೆ.
} ಕಟ್ಟಡ ನಕ್ಷೆಯ 4 ಪ್ರತಿಗಳೊಂದಿಗೆ ಮುಂದಿನ ಕ್ರಮಕ್ಕಾಗಿ ರವಾನಿಸಲಾಗಿದೆ.

**ಪ್ರತಿಯನ್ನು:**

1. ಕಾರ್ಯದರ್ಶಿ, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ನಂ. 1/14, 2ನೇ ಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್, ಸಿ.ಎಸ್.ಐ ಕಾಂಪೌಂಡ್, 3ನೇ ಕ್ರಾಸ್ ಮಿಷನ್ ರಸ್ತೆ, ಬೆಂಗಳೂರು–560027 ಇವರ ಮಾಹಿತಿಗಾಗಿ ಕಳುಹಿಸಿದೆ.
2. ಮೆ॥ ಹೆಬ್ಬಾಳ್ ಪ್ರಾಪರ್ಟೀಸ್ ಪ್ರೈವೇಟ್ ಲಿಮಿಟೆಡ್, ನಂ. 10/1, ನೆಲಮಹಡಿ, ಲಕ್ಷ್ಮೀನಾರಾಯಣ ಕಾಂಪ್ಲೆಕ್ಸ್, ಪ್ಯಾಲೇಸ್ ರಸ್ತೆ, ಬೆಂಗಳೂರು – 560001.
3. ಕಛೇರಿ ಪ್ರತಿ.